# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಚಿವರುಗಳು ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಅದಕ್ಕಿಂತ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಮೊಬೈಲ್ ದೂರವಾಣಿ ಸೌಲಭ್ಯವನ್ನು ಒದಗಿಸುವ ಬಗ್ಗೆ.

**********

## ಪ್ರಸ್ತಾವನೆ:

ಸಚಿವರುಗಳು ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಅದಕ್ಕಿಂತ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳ ಇಲಾಖೆಯ ಕಾರ್ಯಭಾರಕ್ಕೆ ಸಂಬಂಧಿಸಿದಂತೆ ಹಾಗೂ ದೈನಂದಿನ ಆಡಳಿತಾತ್ಮಕ ಕೆಲಸ ಕಾರ್ಯಗಳನ್ನು ಸುಸೂತ್ರವಾಗಿ ನಡೆಸಲು ಅನುಕೂಲವಾಗುವಂತೆ ಹಾಗೂ ಇವರು ಕಛೇರಿ ಅಥವಾ ನಿವಾಸದಲ್ಲಿ ಇಲ್ಲದ ಸಮಯದಲ್ಲಿ ಸಂಪರ್ಕಿಸಲು ಅನುಕೂಲವಾಗುವಂತೆ ಎಲ್ಲಾ ಸಚಿವರುಗಳಿಗೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಅದಕ್ಕಿಂತ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಮೊಬೈಲ್ ದೂರವಾಣಿ ಸೌಲಭ್ಯ ನೀಡಲು ತೀರ್ಮಾನಿಸಲಾಗಿದೆ. ಅದರಂತೆ ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ.

## ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 30 (ಎ) ಡಿಟಿಎಸ್ 2003, ಬೆಂಗಳೂರು, ದಿನಾಂಕ: 26.5.2003 (ಯೂನಿಟ್ ಸಂಖ್ಯೆ: 86:2003)

ಎಲ್ಲಾ ಸಚಿವರುಗಳು ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಅದಕ್ಕಿಂತ ಮೇಲ್ಪಟ್ಟ ದರ್ಜೆಯ ಅಧಿಕಾರಿಗಳಿಗೆ ಮೊಬೈಲ್ ದೂರವಾಣಿ ಸೌಲಭ್ಯವನ್ನು ಒದಗಿಸಲು ಈ ಮೂಲಕ ಮಂಜೂರಾತಿ ನೀಡಲಾಗಿದೆ. ಮೊಬೈಲ್ ದೂರವಾಣಿ ಉಪಕರಣ, ಠೇವಣಿ (ಡಿಪಾಸಿಟ್), ಸಿಮ್ ಕಾರ್ಡ್ ವೆಚ್ಚ, ಎಲ್ಲಾ ಸೇರಿ ಪ್ರತಿ ಪ್ರಕರಣದಲ್ಲೂ ರೂ.10,000-00 ದಷ್ಟರ ಮಿತಿಗೆ ಒಳಪಟ್ಟು ಹಾಗೂ ಟೆಂಡರ್ ಕರೆದು ಅತ್ಯಂತ ಕನಿಷ್ಠ ದರದಲ್ಲಿಯೇ ಒದಗಿಸುವ ಸಂಸ್ಥೆಯ ಮುಖಾಂತರ ಮೊಬೈಲ್ ದೂರವಾಣಿ ಸೌಲಭ್ಯವನ್ನು ಒದಗಿಸತಕ್ಕದ್ದು.

2--

[illegible] ಆಯುಕ್ತ ... (ಕಡೆಗಳ ಮಂತ್ರಿ ಇತ್ಯಾದಿ)

ಸಚಿವರುಗಳು, ರಾಜ್ಯಸಚಿವರುಗಳು ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ತಿಂಗಳೊಂದರ ರೂ.5,000-00 ರ ಮಿತಿಯನ್ನು ಹಾಗೂ ಇತರರಿಗೆ ತಿಂಗಳೊಂದರ ರೂ.3,000-00 ಮಿತಿಯನ್ನು ವಿಧಿಸಲಾಗಿದೆ.

ಈ ಆದೇಶವನ್ನು ಟಿಪ್ಪಣಿ ಸಂಖ್ಯೆ: ಆಇ 2 ಬಿಇಎಂ 98, ದಿನಾಂಕ: 13.3.2003 ರಲ್ಲಿ ಆರ್ಥಿಕ ಇಲಾಖೆ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಕೆ. ರವಿಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ
ಇಲಾಖೆ (ಕಾರ್ಯಕಾರಿ-1)

ಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು
3) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳವರಿಗೆ
4) ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
5) ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿ
6) ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ
7) ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳಿಗೆ
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ-2)
9) ಸರ್ಕಾರದ ಅಧೀನ ಕಾರ್ಯದರ್ಶಿ(ವೆಚ್ಚ-3) ಆರ್ಥಿಕ ಇಲಾಖೆ
10) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ-2)
11) ಮುಖ್ಯಾಧಿಕಾರಿ, ಕರ್ನಾಟಕ ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
12) ಶಾಖಾ ರಕ್ಷಾ ಕಡತ
13) ಹೆಚ್ಚುವರಿ ಪ್ರತಿಗಳು.